ದಿನಾಂಕ:17.07.2014ರ ಚುಕ್ಕೆರಹಿತ ಪ್ರಶ್ನೆಗಳಿಗೆ ದಿನಾಂಕ:18.07.2014 ರಂದು ಮಂಡಿಸಲಾದ ಪ್ರಶ್ನೆಗಳಿಗೆ ಉತ್ತರ

ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊರೆದ ಕೊಳವೆ ಬಾವಿಗಳಿಗೆ ವಿದ್ಯುತ್

2745 (1782), ಶ್ರೀ ಐಹೋಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊಳವೆ ಬಾವಿಗಳಿಗೆ ಮೋಟಾರ್ ಹಾಗೂ ವಿದ್ಯುತ್ ಸಂಪರ್ಕ ಕಲ್ಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಆ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನಲ್ಲಿ ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ ಎಷ್ಟು ಕೊಳವೆ ಬಾವಿಗಳಿಗೆ ಮೋಟರ್ ಹಾಗೂ ವಿದ್ಯುತ್ ಅಳವಡಿಸಲಾಗಿದೆ; (ವಿವರ ನೀಡುವುದು);

ಇ) ಸದರಿ ಯೋಜನೆಯಲ್ಲಿ ಇನ್ನೂ ಮೋಟಾರ್ ಹಾಗೂ ವಿದ್ಯುತ್ ಅಳವಡಿಸದೇ ಇರುವ ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ;

ಶ್ರೀ ಹೆಚ್.ಆಂಜನೇಯ (ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖಾ ಸಚಿವರು)

ಅ) ರಾಜ್ಯದಲ್ಲಿ ಗಂಗಾ ಕಲ್ಯಾಣ ಯೋಜನೆಯಲ್ಲಿ ಕೊರೆದ ಸಫಲ ಕೊಳವೆ ಬಾವಿಗಳಿಗೆ ಮೋಟಾರ್ ಹಾಗೂ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು.

ಆ) ಡಾ||ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ 2011–12 ರಿಂದ 2013–14ನೇ ಸಾಲಿನವರೆಗೆ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನಲ್ಲಿ ಹಿಂದಿನ ಬಾಕಿ ಸೇರಿ 137 ಕೊಳವೆ ಬಾವಿಗಳಿಗೆ ಪಂಪ್ ಸೆಟ್ ಅಳವಡಿಸಲಾಗಿದೆ ಹಾಗೂ 265 ಕೊಳವೆ ಬಾವಿಗಳಿಗೆ ವಿದ್ಯುದ್ದೀಕರಣಗೊಳಿಸಲಾಗಿದೆ.

ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಿಂದ 2007–08 ರಿಂದ 2012–13ನೇ ಸಾಲಿನವರೆಗೆ ಬೆಳಗಾವಿ ಜಿಲ್ಲೆಯ ರಾಯಭಾಗ ತಾಲ್ಲೂಕಿನಲ್ಲಿ 121 ಕೊಳವೆ ಬಾವಿಗಳಿಗೆ ಪಂಪ್ ಸೆಟ್ ಅಳವಡಿಸಿ, 115 ಕೊಳವೆ ಬಾವಿಗಳಿಗೆ ವಿದ್ಯುದ್ದೀಕರಣಗೊಳಿಸಲಾಗಿದೆ.

ಇ) ಪಂಪ್ ಮೋಟಾರು ಅಳವಡಿಸಲು ಬಾಕಿ ಇರುವ ಕೊಳವೆ ಬಾವಿಗಳಿಗೆ ಪಂಪ್ ಸೆಟ್‌ಗಳನ್ನು ಸರಬರಾಜು ಮಾಡಲು ಕ್ರಮ ವಹಿಸಲಾಗಿದೆ.

ವಿದ್ಯುತ್ ಸಂಪರ್ಕ ಕಲ್ಪಿಸಲು ವಿದ್ಯುತ್ ಸರಬರಾಜು ಕಂಪನಿಯಲ್ಲಿ ಅರ್ಜಿ ನೋಂದಾಯಿಸಿ, ನಿಯಮದಂತೆ ನೋಂದಣಿ ಶುಲ್ಕ, ವೈಎಂಡಿ ಪಾವತಿಸಲಾಗುತ್ತಿದ್ದು, ವಿದ್ಯುತ್ ಸಂಪರ್ಕಕ್ಕಾಗಿ ಪ್ರತಿ ಕೊಳವೆ ಬಾವಿಗೆ ₹ 50,000/– ಎಸ್ಕಾಂಗಳಿಗೆ ಹನ ಬಿಡುಗಡೆ ಮಾಡಲಾಗುತ್ತಿದೆ. ಈ ಸಂಬಂಧ ಎಸ್ಕಾಂಗಳೊಂದಿಗೆ ವಿವಿಧ ಹಂತಗಳಲ್ಲಿ ಸಭೆಗಳನ್ನು ನಡೆಸಲಾಗುತ್ತಿದೆ.

ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಸಾಲಗಳ ಯೋಜನೆ

2746 (2181), ಶ್ರೀ ಅನಿಲ್ ಲಾಡ್ (ಬಳ್ಳಾರಿ ನಗರ)

ಅ) ಡಾ॥ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಶಾಸಕರ ಆಯ್ಕೆಪಟ್ಟಿಯನ್ನು ಹೊರತುಪಡಿಸಿ ಸಾಲಗಳು ನೀಡುತ್ತಿರುವ ಯೋಜನೆಯಲ್ಲಿ ಅವ್ಯವಹಾರ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ನಿಜವಾದ ಫಲಾನುಭವಿಗಳಿಗೆ ಯೋಜನೆಯ ಲಾಭ ಆಗುತ್ತಿದೆಯೇ;

ಇ) ಈ ಅವ್ಯವಹಾರ ತಡೆಗಟ್ಟಲು ಸರ್ಕಾರದ ನಿಲುವೇನು?